ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
20ನೇ ಮಹಡಿ, ವಿ.ವಿ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು
560001

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618
Email:directorgokdom@gmail.com
Web: www.gokdom.kar.nic.in

**ಸಂಖ್ಯೆ:-ಅಸಂನಿ/ಅ/ಜಿಕಪತ್ರ/ಸಿಆರ್-30/2021-22** **ದಿನಾಂಕ:19.11.2021**

# ಸುತ್ತೋಲೆ

**ವಿಷಯ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುವ ಉದ್ಯೋಗಸ್ಥ ಮಹಿಳಾ ವಿದ್ಯಾರ್ಥಿನಿಲಯಗಳು ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಮಹಿಳಾ ಸುರಕ್ಷತಾ ದೃಷ್ಠಿಯಿಂದ ಮಹಿಳಾ ವಾರ್ಡನ್‌ಗಳನ್ನು ನಿಯೋಜಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಕಾರ್ಯದರ್ಶಿಗಳ ಸುತ್ತೋಲೆ ಸಂಖ್ಯೆ : ಎಂಡಬ್ಲೂಡಿ 55 ಎಂಡಿಎಸ್ 2021 ಬೆಂಗಳೂರು ದಿನಾಂಕ: 17-11-2021.

>>>$<<<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಿರುವಂತೆ ರಾಜ್ಯದಲ್ಲಿ ಶಾಲಾ ಕಾಲೇಜು ಹಾಗೂ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಮೇಲೆ ಹಾಗೂ ಮಹಿಳಾ ಸಿಬ್ಬಂದಿಗಳ ಮೇಲೆ ಲೈಂಗಿಕ ಕಿರುಕುಳ/ಅತ್ಯಾಚಾರ ಹಾಗೂ ದೈಹಿಕ ಹಿಂಸೆ ಸೇರಿದಂತೆ ಹಲವಾರು ಪ್ರಕಣಗಳು ಗಣನೀಯವಾಗಿ ನಡೆಯುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ ಹಾಗೂ ಈ ಬಗ್ಗೆ ಮಾದ್ಯಮಗಳಲ್ಲಿ ವರದಿಯಾಗುತ್ತಿರುವುದರಿಂದ, ಸರ್ಕಾರವು ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು ಇದನ್ನು ತಡೆಗಟ್ಟುವುದು ಸರ್ಕಾರದ/ಇಲಾಖೆಯ ಆದ್ಯ ಕರ್ತವ್ಯವಾಗಿರುತ್ತದೆ.

ಈ ಹಿನ್ನಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿನ ಉದ್ಯೋಗಸ್ಥ ಮಹಿಳಾ ವಿದ್ಯಾರ್ಥಿನಿಲಯಗಳು ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿನ ಮಹಿಳೆಯರು ಮತ್ತು ವಿದ್ಯಾರ್ಥಿನಿಯರ ಮೇಲೆ ಲೈಂಗಿಕ ದೌರ್ಜನ್ಯ ತಡೆಗಟ್ಟಲು/ಹತ್ತಿಕ್ಕಲು ಕೆಳಗೆ ತಿಳಿಸಿರುವ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ ಸೂಕ್ತಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

1. ರಾಜ್ಯದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯನಿರತ ಮಹಿಳಾ ವಿದ್ಯಾರ್ಥಿನಿಲಯಗಳು ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿನ ಮಹಿಳೆಯರು ಮತ್ತು ವಿದ್ಯಾರ್ಥಿನಿಲಯಗಳಿಗೆ ಮಹಿಳಾ ವಾರ್ಡನ್‌ಗಳನ್ನೇ (Women Warden) ನಿಯೋಜಿಸುವುದು.
2. ಒಂದು ವೇಳೆ ಇಲಾಖೆಯಲ್ಲಿ ಮಹಿಳಾ ವಾರ್ಡನ್‌ಗಳು ಲಭ್ಯವಿಲ್ಲದಿದ್ದಲ್ಲಿ ಮಹಿಳಾ ಶಿಕ್ಷಕರನ್ನು ವಾರ್ಡನ್ ಹುದ್ದೆಗೆ ಹೆಚ್ಚುವರಿ ಪ್ರಭಾರದಲ್ಲಿರಿಸುವುದು.
3. ಸದರಿ ವಿದ್ಯಾರ್ಥಿನಿಲಯಗಳಿಗೆ ಭದ್ರತಾ ಸಿಬ್ಬಂದಿಯನ್ನೂ ಸಹ ಮಹಿಳಾ ಸಿಬ್ಬಂದಿಯನ್ನೇ ನಿಯೋಜಿಸುವಂತೆ ಹಾಗೂ ಯಾವುದೇ ಕಾರಣದಿಂದ ಪುರುಷ ವಾರ್ಡನ್ ಅಥವಾ ಪುರುಷ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಬಾರದೆಂದು ಈ ಮೂಲಕ ಸೂಚಿಸಲಾಗಿದೆ.

ಪು.ತಿ.ನೋ